ಕರ್ನಾಟಕ ವಿಧಾನಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	41
ಸದಸ್ಯರ ಹೆಸರು	ಶ್ರೀ ಕೆ.ಟಿ.ಶ್ರೀಕಂಠೇಗೌಡ (ಪದವೀಧರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	21-09-2020
ಉತ್ತರಿಸಬೇಕಾದ ಸಚಿವರು	ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು

ಪ್ರಶ್ನೆ	ಉತ್ತರ
ಅ) ರಾಜ್ಯದ ಖಾಸಗಿ ಅನುದಾನಿತ-ಶಾಲಾ ಕಾಲೇಜುಗಳಲ್ಲಿ ಅನುದಾನ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ
ಆ) ಇತ್ತೀಚೆಗೆ ಆರ್ಥಿಕ ಇಲಾಖೆಯ ಎಲ್ಲಾ ಅನುದಾನಿತ ಹುದ್ದೆಗಳ ನೇಮಕಾತಿಯನ್ನು ತಡೆಹಿಡಿಯುವಂತೆ ಆದೇಶ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ: ಆಇ 157 ವೆಚ್ಚ-8/2020 ದಿನಾಂಕ: 10-06-2020. ರಲ್ಲಿ ಪ್ರಸ್ತುತ ಕೋವಿಡ್-19ರ ಹಿನ್ನೆಲೆಯಲ್ಲಿ ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ನಿವೃತ್ತಿ, ನಿಧನ, ರಾಜೀನಾಮೆ ಮತ್ತು ಇತರೆ ಯಾವುದೇ ಕಾರಣಗಳಿಂದ ಖಾಲಿ ಉಂಟಾಗುವ ಹುದ್ದೆಗಳನ್ನು 2020-21ನೇ ಸಾಲಿನಲ್ಲಿ ಭರ್ತಿ ಮಾಡುವಂತಿಲ್ಲವೆಂದು ಹಾಗೂ ಸದರಿ ನಿಯಮವು ಈಗಾಗಲೇ ಭರ್ತಿ ಮಾಡಲು ಆರ್ಥಿಕ ಇಲಾಖೆಯು ಸಹಮತಿಸಿರುವ ಪ್ರಕರಣಗಳಿಗೂ ಸಹ ಅನ್ವಯಿಸತಕ್ಕದೆಂದು ಹಾಗೂ 2020-21ನೇ ಸಾಲಿನಲ್ಲಿ ಯಾವುದೇ ಹೊಸ ಅನುದಾನ ರಹಿತ ವಿದ್ಯಾಸಂಸ್ಥೆಗಳನ್ನು ಅನುದಾನಕ್ಕೆ ಒಳಪಡಿಸುವಂತಿಲ್ಲವೆಂದು ರಾಜ್ಯದಲ್ಲಿ ಆರ್ಥಿಕ ಮಿತವ್ಯಯವನ್ನು ಜಾರಿಗೊಳಿಸಿದೆ.
ಇ) ಬಂದಿದ್ದಲ್ಲಿ ಈ ಆದೇಶವನ್ನು ವಾಪಸ್ಸು ಪಡೆಯಲು ಸರ್ಕಾರ ಕೈಗೊಂಡ ಕ್ರಮಗಳೇನು;	ಈ ಬಗ್ಗೆ ಆರ್ಥಿಕ ಇಲಾಖೆಯು ಕ್ರಮ ಕೈಗೊಳ್ಳಬೇಕಾಗಿದೆ.
ಈ) ಯಾವ ಕಾಲಮಿತಿಯೊಳಗೆ ಈ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗುವುದು? (ವಿವರ ನೀಡುವುದು)	ಆರ್ಥಿಕ ಇಲಾಖೆಯು ಆರ್ಥಿಕ ಮಿತವ್ಯಯ ಆದೇಶ ಹಿಂಪಡೆದ ನಂತರ ಕ್ರಮ ಕೈಗೊಳ್ಳಲು ಪರಿಶೀಲಿಸಲಾಗುವುದು.

ಇಡಿ 112 ಪಿಎಂಸಿ 2020

[ಎಸ್.ಸುರೇಶ್ ಕುಮಾರ್]
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ
ಸಕಾಲ ಸಚಿವರು.